# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1055

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ.
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 22-09-2022

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯ ಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯ ಸರ್ಕಾರ ನೌಕರರಿಗೆ ಕೇಂದ್ರ ಸರ್ಕಾರಿ ನೌಕರರಿಗೆ ಸರಿಸಮಾನವಾದ ವೇತನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಕೇಂದ್ರ ಮತ್ತು ರಾಜ್ಯ ಸರ್ಕಾರಿ ಸೇವೆಗಳಿಗೆ ಸೇರಿದ ಹುದ್ದೆಗಳ ಸೇವಾ ನಿಬಂಧನೆ, ಹುದ್ದೆಗಳ ಪದನಾಮ, ಅರ್ಹತೆಯ ಮಾನದಂಡ, ನೇಮಕಾತಿ ವಿಧಾನ, ಕರ್ತವ್ಯ ಮತ್ತು ಜವಾಬ್ದಾರಿಗಳು, ಹುದ್ದೆಯ ಕಾರ್ಯವ್ಯಾಪ್ತಿ ಮುಂತಾದ ಮೂಲಭೂತ ಭಿನ್ನತೆಗಳಿಂದಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅವುಗಳದ್ದೇ ಆದ ವೇತನ ರಚನೆ ಮತ್ತು ನಿಯಮಗಳನ್ನು ರೂಪಿಸಿಕೊಂಡಿರುತ್ತವೆ. ಆದುದರಿಂದ, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಹಂತಗಳ ಹುದ್ದೆ ಮತ್ತು ಅವುಗಳಿಗೆ ನಿಗದಿಪಡಿಸಿರುವ ವೇತನ ಮತ್ತು ಭತ್ಯೆಗಳನ್ನು ಪರಸ್ಪರ ಹೋಲಿಕೆ ಮಾಡಲು ಬರುವುದಿಲ್ಲ. |
| (ಆ) | ದೇಶದಲ್ಲಿನ ಬಹುತೇಕ ರಾಜ್ಯಗಳು ಈಗಾಗಲೇ ತನ್ನ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರಿ ನೌಕರರಿಗೆ ಸರಿಸಮಾನವಾದ ವೇತನ ನೀಡುತ್ತಿರುವುದು ಮತ್ತು ಅದೇ ಮಾದರಿಯನ್ನು | ಇಲ್ಲ |



Generated from eOffice by G JAGADEESHA, CMO JS(GJ), JOINT SECREATRY, CMO on 16/09/2022 03:52 PM

| | | |
|---|---|---|
| | ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; | |
| (ಇ) | ಆರ್ಥಿಕ ಪ್ರಗತಿ ಹಾಗೂ ಅಭಿವೃದ್ಧಿ ದೃಷ್ಟಿಯಲ್ಲಿ ದೇಶದ ಬಹುತೇಕ ರಾಜ್ಯಗಳಿಗಿಂತ ಸಾಕಷ್ಟು ಮುಂದಿರುವ ಕರ್ನಾಟಕ ರಾಜ್ಯ ತನ್ನ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರಿ ನೌಕರರಿಗೆ ಸರಿಸಮಾನವಾದ ವೇತನ ನೀಡಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ? | ಮೇಲಿನ ಉತ್ತರ (ಅ) ಇಂದ ಉದ್ಭವಿಸುವುದಿಲ್ಲ. |

ಸಂ: ಆಇ 39 ಎಸ್‌ಆರ್‌ಪಿ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECREATRY, CMO on 16/09/2022 03:52 PM